**Bangalore**
**Regional Kannada**
**27.04.2024 / 14.30 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

೧. ಕೇಂದ್ರದಿಂದ ರಾಜ್ಯಕ್ಕೆ ೩ ಸಾವಿರದ ೪೫೪ ಕೋಟಿ ರೂಪಾಯಿ ಬರ ಪರಿಹಾರದ ಹಣ ಬಿಡುಗಡೆ - ಮುಖ್ಯಮಂತ್ರಿ ಸಿದ್ದರಾಮಯ್ಯ; ಕೇಂದ್ರದ ನಿರ್ಧಾರ ಸ್ವಾಗತಿಸಿದ ಬಿಜೆಪಿ

೨. ಎರಡನೇ ಹಂತದ ೧೪ ಲೋಕಸಭಾ ಕ್ಷೇತ್ರಗಳಲ್ಲಿ ಬಿರುಸುಗೊಂಡ ಮತದಾರರ ಜಾಗೃತಿ ಕಾರ್ಯಕ್ರಮ

೩. ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದಿನ ಮೂರು ದಿನ ಬಿಸಿಗಾಳಿ; ಭಾರತೀಯ ಹವಾಮಾನ ಇಲಾಖೆ ಎಚ್ಚರಿಕೆ

೪. ಐಪಿಎಲ್ ಕ್ರಿಕೆಟ್ ಟೂರ್ನಿಯಲ್ಲಿಂದು ಡೆಲ್ಲಿ ಕ್ಯಾಪಿಟಲ್ಸ್-ಮುಂಬೈ ಇಂಡಿಯನ್ಸ್ ಮತ್ತು ಲಖನೌ ಸೂಪರ್ ಜೈಂಟ್ಸ್-ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿ

**<><*<><>*><>**

ಕೇಂದ್ರ ಸರ್ಕಾರ ರಾಜ್ಯಕ್ಕೆ ಮೂರು ಸಾವಿರದ ೪೫೪ ಕೋಟಿ ರೂಪಾಯಿ ಬರ ಪರಿಹಾರದ ಹಣ ಬಿಡುಗಡೆ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕಲಬುರಗಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಎನ್‌ಡಿಆರ್‌ಎಫ್ ನಿಯಮಾವಳಿ ಪ್ರಕಾರ ರಾಜ್ಯಕ್ಕೆ ೧೮ ಸಾವಿರದ ೧೭೧ ಕೋಟಿ ರೂಪಾಯಿ ಬರಬೇಕಾಗಿದೆ. ಆದರೆ ಕೇಂದ್ರ ಸರ್ಕಾರ ಈಗ ೩ ಸಾವಿರದ ೪೫೪ ಕೋಟಿ ರೂಪಾಯಿ ಬಿಡುಗಡೆ ಮಾಡಿದೆ ಎಂದು ತಿಳಿಸಿದರು. ರಾಜ್ಯದ ೨೨೩ ತಾಲೂಕುಗಳನ್ನು ಕಳೆದ ವರ್ಷವೇ ಬರ ಪೀಡಿತವೆಂದು ಘೋಷಣೆ ಮಾಡಲಾಗಿತ್ತು. ಸುಮಾರು ೪೮ ಲಕ್ಷ ಹೆಕ್ಟೇರ್‌ನಲ್ಲಿನ ಬೆಳೆ ಹಾನಿಯಾಗಿತ್ತು. ಇದರ ಒಟ್ಟಾರೆ ನಷ್ಟ ೩೫ ಸಾವಿರ ಕೋಟಿ ರೂಪಾಯಿಗಳಾಗಿತ್ತು. ವಾಸ್ತವ ಸ್ಥಿತಿ ಹೀಗಿದ್ದರೂ, ರಾಜ್ಯ ಕೇಳಿದ್ದು ೧೮ ಸಾವಿರ ಕೋಟಿ ರೂಪಾಯಿ ಮಾತ್ರ ಎಂದು ಮುಖ್ಯಮಂತ್ರಿ ತಿಳಿಸಿದರು. ಈ ನಡುವೆ, ಕೇಂದ್ರದ ಈ ನಿರ್ಧಾರವನ್ನು ಬಿಜೆಪಿ ಹಿರಿಯ ನಾಯಕ, ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಸೇರಿದಂತೆ ಅನೇಕ ನಾಯಕರು ಸ್ವಾಗತಿಸಿದ್ದಾರೆ.

**<><*<><>*><>**

ರಾಜ್ಯದಲ್ಲಿ ಮುಂದಿನ ತಿಂಗಳ ೭ರಂದು ಎರಡನೇ ಹಂತದಲ್ಲಿ ೧೪ ಲೋಕಸಭಾ ಕ್ಷೇತ್ರಗಳಿಗೆ ಚುನಾವಣೆ ನಡೆಯಲಿದೆ. ಇದಕ್ಕಾಗಿ ಜಿಲ್ಲೆಗಳಲ್ಲಿ ಮತದಾರರ ಜಾಗೃತಿ ಕಾರ್ಯಕ್ರಮ ಬಿರುಸುಗೊಂಡಿದೆ. ಈ ಹಂತದಲ್ಲಿ ಸುಮಾರು ೨ ಕೋಟಿ ೫೦ ಲಕ್ಷ ಮತದಾರರು ಹಕ್ಕು ಚಲಾಯಿಸಲಿದ್ದಾರೆ. ಚಿಕ್ಕೋಡಿ, ಬೆಳಗಾವಿ, ಬಾಗಲಕೋಟೆ, ವಿಜಯಪುರ, ಕಲಬುರಗಿ, ರಾಯಚೂರು, ಬೀದರ್, ಕೊಪ್ಪಳ, ಬಳ್ಳಾರಿ, ಹಾವೇರಿ, ಧಾರವಾಡ, ಉತ್ತರಕನ್ನಡ, ದಾವಣಗೆರೆ ಮತ್ತು ಶಿವಮೊಗ್ಗ ಕ್ಷೇತ್ರಗಳಲ್ಲಿ ಚುನಾವಣೆ ನಡೆಯಲಿದೆ. ಚುನಾವಣಾ ಕಣದಲ್ಲಿ ೨೨೭ ಅಭ್ಯರ್ಥಿಗಳಿದ್ದಾರೆ. ಇವರ ಪೈಕಿ ೨೦೬ ಪುರುಷ ಅಭ್ಯರ್ಥಿಗಳು ಹಾಗೂ ೨೧ ಮಹಿಳಾ ಅಭ್ಯರ್ಥಿಗಳು ಸೇರಿದ್ದಾರೆ. ಎರಡನೇ ಹಂತದ ಚುನಾವಣೆಗಾಗಿ ೨೮ ಸಾವಿರದ ೨೬೯ ಮತಗಟ್ಟೆಗಳನ್ನು ತೆರೆಯಲಾಗಿದೆ. ೧೨ ಲೋಕಸಭಾ ಕ್ಷೇತ್ರಗಳಲ್ಲಿ ಕಾಂಗ್ರೆಸ್

ಮತ್ತು ಬಿಜೆಪಿ ನಡುವೆ ನೇರ ಹಣಾಹಣಿ ಏರ್ಪಟ್ಟಿದೆ. ಬಂಡಾಯದ ಕಾರಣ ಶಿವಮೊಗ್ಗ ಮತ್ತು ದಾವಣಗೆರೆ ಲೋಕಸಭಾ ಕ್ಷೇತ್ರಗಳಲ್ಲಿ ತ್ರಿಕೋನ ಸ್ಪರ್ಧೆ ಉಂಟಾಗಿದೆ. ಈ ನಡುವೆ, ಚುನಾವಣೆ ನಡೆಯುವ ಜಿಲ್ಲೆಗಳಲ್ಲಿ ಪ್ರಚಾರ ಕಾರ್ಯ ಬಿರುಸುಗೊಂಡಿದೆ. ಮತದಾನಕ್ಕಾಗಿ ಜಿಲ್ಲೆಗಳಲ್ಲಿ ಅಗತ್ಯ ಸಿದ್ಧತೆ ಕೈಗೊಳ್ಳಲಾಗಿದೆ. ಉತ್ತರ ಕನ್ನಡ ಜಿಲ್ಲೆಯ ಎಲ್ಲಾ ಮತದಾರರು ಮತದಾನದ ಹಕ್ಕು ಚಲಾಯಿಸಬೇಕು ಎಂದು ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ತಿಳಿಸಿದ್ದಾರೆ. ಹೆಚ್ಚಿನ ಸಂಖ್ಯೆಯಲ್ಲಿ ಮತದಾನ ಮಾಡುವ ಬಗ್ಗೆ ಜಾಗೃತಿ ಮೂಡಿಸಲು ಸ್ವೀಪ್ ಕಾರ್ಯಕ್ರಮದಡಿ ಕಾರವಾರದಲ್ಲಿಂದು ಆಯೋಜಿಸಿದ್ದ ಮೋಟಾರ್ ಸೈಕಲ್ ಜಾಥಾಗೆ ಚಾಲನೆ ನೀಡಿ ಅವರು ಮಾತನಾಡಿದರು. ಜಿಲ್ಲೆಯ ೮೫ ವರ್ಷ ಮೇಲ್ಪಟ್ಟವರು ಮತ್ತು ವಿಶೇಷ ಚೇತನರಿಗಾಗಿ ಕೈ ಗೊಂಡ ಮನೆಯಿಂದಲೇ ಮತದಾನ ಮಾಡುವ ಕಾರ್ಯಕ್ಕೆ ಉತ್ತಮ ಪ್ರತಿಕ್ರಿಯೆ ದೊರೆತಿದೆ ಎಂದರು. ಜಿಲ್ಲಾ ಸ್ವೀಪ್ ಸಮಿತಿ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕುಮಾರ ಕಾಂದೂ ಮಾತನಾಡಿ, ಸ್ವೀಪ್ ಸಮಿತಿ ವತಿಯಿಂದ ಜಿಲ್ಲೆಯಾದ್ಯಂತ ಮತದಾನ ಜಾಗೃತಿಯ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಜಿಲ್ಲೆಯ ಎಲ್ಲಾ ಅರ್ಹ ಮತದಾರರು ತಮ್ಮ ಕುಟುಂಬ ಸಮೇತ ಮತಗಟ್ಟೆಗೆ ಆಗಮಿಸಿ ಮತದಾನ ಮಾಡುವ ಮೂಲಕ, ಕಳೆದ ವಿಧಾನಸಭಾ ಚುನಾವಣೆಗಿಂತ ಹೆಚ್ಚಿನ ಪ್ರಮಾಣದಲ್ಲಿ ಮತದಾನ ನಡೆಯಲು ಸಹಕರಿಸಬೇಕು ಎಂದರು. ಗದಗ ಜಿಲ್ಲೆಯಲ್ಲಿ ಮೇ ೭ರಂದು ಎರಡನೇ ಹಂತದ ಮತದಾನ ಜರುಗಲಿದ್ದು, ವಿಶೇಷಚೇತನರು ಹಾಗೂ ಹಿರಿಯ ನಾಗರಿಕರು ಸರಾಗವಾಗಿ ಮತದಾನ ಮಾಡಲು ಅಗತ್ಯ ವ್ಯವಸ್ಥೆ ಕಲ್ಪಿಸಲಾಗಿದೆ ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್.ತಿಳಿಸಿದ್ದಾರೆ. ಧಾರವಾಡ ಲೋಕಸಭಾ ಮತಕ್ಷೇತ್ರ ವ್ಯಾಪ್ತಿಯಲ್ಲಿ ಒಂದು ಸಾವಿರದ ೧೪೧ ಜನ ೮೫ ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರು ಮತ್ತು ೩೬೮ ವಿಶೇಷಚೇತನರು ಸೇರಿದಂತೆ ಒಟ್ಟು ಒಂದು ಸಾವಿರದ ೫೦೯ ಮತದಾರರು ಮನೆಯಿಂದ ಮತ ಚಲಾಯಿಸಿದ್ದಾರೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ತಿಳಿಸಿದ್ದಾರೆ. ಮಂಡ್ಯ ಜಿಲ್ಲೆಯಲ್ಲಿ ನಿನ್ನೆ ನಡೆದ ಮೊದಲ ಹಂತದ ಚುನಾವಣೆಯಲ್ಲಿ ಶೇಕಡ ೮೧.೬೭ರಷ್ಟು ಮತದಾನವಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ತಿಳಿಸಿದ್ದಾರೆ. ನಾಳೆ ಬೆಳಗಾವಿಯಲ್ಲಿ ಬಿಜೆಪಿ ವತಿಯಿಂದ ಪಕ್ಷದ ಬೃಹತ್ ಸಮಾವೇಶ ನಡೆಯಲಿದೆ. ಪಕ್ಷದ ಹಿರಿಯ ನಾಯಕ ಜಗದೀಶ್ ಶೆಟ್ಟರ್ ಸೇರಿದಂತೆ ಅನೇಕ ಮುಖಂಡರು ಇಂದು ಸ್ಥಳ ಪರಿಶೀಲಿಸಿದರು. ಈ ಸಮಾವೇಶದಲ್ಲಿ ಬಿಜೆಪಿ ಮತ್ತು ಜೆಡಿಎಸ್ ಪಕ್ಷದ ಹಿರಿಯ ನಾಯಕರಾದ ಬಿ.ಎಸ್. ಯಡಿಯೂರಪ್ಪ, ಬಿಜೆಪಿ ರಾಜ್ಯಾಧ್ಯಕ್ಷ, ಬಿ.ವೈ. ವಿಜಯೇಂದ್ರ, ಜೆಡಿಎಸ್ ಹಿರಿಯ ಧುರೀಣ ಎಚ್.ಡಿ. ದೇವೇಗೌಡ ಹಾಗೂ ಎಚ್.ಡಿ. ಕುಮಾರಸ್ವಾಮಿ ಭಾಗಿಯಾಗಲಿದ್ದಾರೆ ಎಂದು ಜಗದೀಶ್ ಶೆಟ್ಟರ್ ಬೆಳಗಾವಿಯಲ್ಲಿಂದು ತಿಳಿಸಿದರು. ಬಿಜೆಪಿ ಹಿರಿಯ ನಾಯಕ ನರೇಂದ್ರ ಮೋದಿ ನಾಳೆ ಮತ್ತು ನಾಡಿದ್ದು, ರಾಜ್ಯ ಪ್ರವಾಸ ಕೈಗೊಂಡಿದ್ದು, ಎರಡು ದಿನ ೫ ಬಹಿರಂಗ ಸಮಾವೇಶಗಳನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ದಾವಣಗೆರೆ ಸಂಸದ ಜಿ.ಎಂ.ಸಿದ್ದೇಶ್ವರ್ ತಿಳಿಸಿದ್ದಾರೆ. ದಾವಣಗೆರೆಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಳೆ ಬೆಳಿಗ್ಗೆ ೧೦ ಗಂಟೆಗೆ ಬೆಳಗಾವಿ, ೧೨ ಗಂಟೆಗೆ ಉತ್ತರ ಕನ್ನಡ, ಮಧ್ಯಾಹ್ನ ೨ ಗಂಟೆಗೆ ದಾವಣಗೆರೆಗೆ ಆಗಮಿಸಲಿದ್ದಾರೆ. ದಾವಣಗೆರೆಯಲ್ಲಿ ಹಾವೇರಿ ಮತ್ತು ದಾವಣಗೆರೆ ಬಿಜೆಪಿ ಲೋಕಸಭಾ ಅಭ್ಯರ್ಥಿಗಳ ಪರವಾಗಿ ಬಹಿರಂಗ ಸಭೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ ಎಂದು ಹೇಳಿದರು. ನಾಳೆ ಸಂಜೆ ೫ ಗಂಟೆಗೆ ಹೊಸಪೇಟೆ ತೆರಳಲಿದ್ದು. ೨೯ ರಂದು ಬಾಗಲಕೋಟೆ ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಎಂದು ಅವರು ವಿವರ ನೀಡಿದರು.

**<><*<><>*><>**

ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮುಂದಿನ ಎರಡು-ಮೂರು ದಿನ ಬಿಸಿ ಗಾಳಿ ಬೀಸುವ ಸಾಧ್ಯತೆ ಕಾರಣ ಜನರು ಆರೋಗ್ಯದ ಬಗ್ಗೆ ಎಚ್ಚರಿಕೆ ವಹಿಸುವಂತೆ ಭಾರತೀಯ ಹವಾಮಾನ ಇಲಾಖೆ ಸಲಹೆ ನೀಡಿದೆ. ರಾಯಚೂರು, ಯಾದಗಿರಿ, ಕಲಬುರಗಿ, ವಿಜಯಪುರ, ಬಾಗಲಕೋಟೆ, ಕೊಪ್ಪಳ, ಬೀದರ್, ವಿಜಯನಗರ, ಗದಗ, ದಾವಣಗೆರೆ, ಚಿತ್ರದುರ್ಗ, ತುಮಕೂರು, ಚಿಕ್ಕಬಳ್ಳಾಪುರ, ಕೋಲಾರ, ಹಾವೇರಿ, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳಲ್ಲಿ ಬಿಸಿ ಗಾಳಿ ಬೀಸುವ ಸಂಭವವಿದೆ ಎಂದು ಇಲಾಖೆ ವರದಿ ತಿಳಿಸಿದೆ. ಇದೇ ೨೦ ರಿಂದ ಕೆಲವು ಜಿಲ್ಲೆಗಳಲ್ಲಿ ಹಗುರ ಮಳೆಯಾಗಲಿದೆ ಎಂದು ಇಲಾಖೆ ವರದಿ ತಿಳಿಸಿದೆ.

**<><*<><>*><>**

**ಈಗ ಬಾಗಲಕೋಟೆ ಲೋಕಸಭಾ ಕ್ಷೇತ್ರದ ವಿವರಗಳು :**

**ವರದಿಯನ್ನು ಸಿದ್ಧಪಡಿಸಿರುವವರು : ನಮ್ಮ ಜಿಲ್ಲಾ ಪ್ರತಿನಿಧಿ, ಪರಶುರಾಮ್ ಪೇಟಕರ್**

ಬಾಗಲಕೋಟೆ ಜಿಲ್ಲೆ ಸಂಪತ್‌ಭರಿತವಾಗಿದ್ದು, ಚಾಲುಕ್ಯ, ರಾಷ್ಟ್ರಕೂಟರ ಇತಿಹಾಸದ ಕುರುಹು ಇರುವ ಕೇಂದ್ರಸ್ಥಾನವಾಗಿದೆ. ಈ ಜಿಲ್ಲೆ ಮೊದಲ ಅಖಂಡ ವಿಜಯಪುರದಲ್ಲಿತ್ತು. ಭಾರತದ ೫೦ನೇ ಸ್ವಾತಂತ್ರ್ಯ ವರ್ಷಾಚರಣೆ ಸಂದರ್ಭದಲ್ಲಿ ಅಂದ್ರೆ ೧೯೯೭ರಲ್ಲಿ  ಪ್ರತ್ಯೇಕ ಜಿಲ್ಲೆಯಾಗಿ ರೂಪಗೊಂಡಿತು. ಬಾಗಲಕೋಟೆ ಜಿಲ್ಲೆಯಲ್ಲಿ ಬಾದಾಮಿ, ಬಾಗಲಕೋಟೆ, ಬೀಳಗಿ, ಹುನಗುಂದ, ಜಮಖಂಡಿ ಮತ್ತು ಮುಧೋಳ ಎಂಬ ಆರು ತಾಲೂಕುಗಳನ್ನು ಹೊಂದಿದೆ. ೨೦೧೮ರಲ್ಲಿ ಗುಳೇದಗುಡ್ಡ, ಇಲಕಲ್, ರಬಕವಿ-ಬನಹಟ್ಟಿ ಎಂಬ ಮೂರು ಹೊಸ ತಾಲೂಕು ಕೇಂದ್ರಗಳು ಸೃಷ್ಠಿಯಾಗಿವೆ. ಬಾಗಲಕೋಟೆ ಆಲಮಟ್ಟಿ ಆಣೆಕಟ್ಟು ನಿರ್ಮಾಣಕ್ಕೆ ಮುಳುಗಡೆ ಹೊಂದಿ ನವನಗರ ಸೃಷ್ಠಿಯಾಗಿತು. ಮುಳುಗಡೆ ಜಿಲ್ಲೆ ಎಂಬ ಹಣೆಪಟ್ಟಿ ಪಡೆದ ಬಾಗಲಕೋಟೆ ಲೋಕಸಭಾ ಕ್ಷೇತ್ರವು ಎಂಟು ವಿಧಾನಸಭಾ ಕ್ಷೇತ್ರಗಳನ್ನು ಹೊಂದಿದೆ. ಅಂದರೆ ಬಾದಾಮಿ, ಬೀಳಗಿ, ಬಾಗಲಕೋಟೆ,ಹುನಗುಂದ, ಮುಧೋಳ,ಜಮಖಂಡಿ,ತೇರದಾಳ ಸೇರಿದಂತೆ ಗದಗ ಜಿಲ್ಲೆಯ ನರಗುಂದ ವಿಧಾನಸಭಾ ಕ್ಷೇತ್ರವನ್ನೂ ಒಳಗೊಂಡಿದೆ. ಬಾಗಲಕೋಟೆ ಲೋಕಸಭಾ ಕ್ಷೇತ್ರದಲ್ಲಿ ೨೦೦೪,೨೦೦೯,೨೦೧೪,೨೦೧೯ ರ ನಾಲ್ಕು ಚುನಾವಣೆಗಳ ಸಂಸದ ಪಿ.ಸಿ.ಗದ್ದಿಗೌಡರ ಗೆಲವು ಸಾಧಿಸಿದ್ದರು. ೨೦೧೯ರ ಲೋಕಸಭಾ ಚುನಾವಣೆಯಲ್ಲಿ  ಶೇಕಡ ೭೦.೬೨ ರಷ್ಟು ಮತದಾನವಾಗಿತ್ತು. ಒಟ್ಟು ೧೫ ಜನರು ಈ ಲೋಕಸಭಾ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದರು.  ಬಿಜೆಪಿಯ ಹಾಲಿ ಸಂಸದಪಿ.ಸಿ.ಗದ್ದಿಗೌಡರ ಅವರು ಒಟ್ಟು ೬ ಲಕ್ಷ ೬೪ ಸಾವಿರದ ೬೩೮ ಮತಗಳಗಳನ್ನು ಪಡೆದು ಗೆಲವು ಸಾಧಿಸಿದ್ದರು. ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿದ್ದ ವೀಣಾ ವಿಜಯಾನಂದ ಕಾಶಪ್ಪನವರ ೪ ಲಕ್ಷ ೯೬ಸಾವಿರದ ೬೪೫ ಮತಗಳನ್ನು ಪಡೆದುಕೊಂಡು ಪರಾಭವಗೊಂಡಿದ್ದರು. ೨೦೨೪ರ ಸಾರ್ವತ್ರಿಕ ಚುನಾವಣೆಯಲ್ಲಿ ಬಾಗಲಕೋಟೆ ಚುನಾವಣಾ ರಂಗೇರುತ್ತಿದೆ. ಸೋಲಿಲ್ಲದ ಸರದಾರ ಎಂದು ಹೆಸರು ಪಡೆದಿರುವ ಬಿಜೆಪಿ ಅಭ್ಯರ್ಥಿ ಪಿ.ಸಿ.ಗದ್ದಿಗೌಡರ ೫ನೇ ಬಾರಿಗೆ ಚುನಾವಣೆಯಲ್ಲಿ ಸ್ಪರ್ಧೆ ಮಾಡಿದ್ದಾರೆ. ಇನ್ನೊಂದು ಕಡೆ  ಕಾಂಗ್ರೆಸ್ ಪಕ್ಷದ ಅಭ್ಯರ್ಥಿಯಾಗಿ ಮತ್ತೆ  ಹೊಸ ಮುಖವನ್ನು ಪರಿಚಯಿಸಿದೆ. ಅದು ವಿಜಯಪುರದ ಶಾಸಕ, ಸಕ್ಕರೆ ಸಚಿವ ಶಿವಾನಂದ ಪಾಟೀಲ ಅವರ ಪುತ್ರಿ ಸಂಯುಕ್ತಾ ಪಾಟೀಲ ಅವರನ್ನು ಕಣಕ್ಕೀಳಿಸಿದೆ. ೨೦೦೪ರಿಂದ ಬಿಜೆಪಿ ಅಭ್ಯರ್ಥಿ ವಿರುದ್ಧ ಕಾಂಗ್ರೆಸ್ ಅಭ್ಯರ್ಥಿಯನ್ನು ಬದಲಾಯಿಸುತ್ತಲೇ ಬಂದಿತ್ತು. ೨೦೧೯ರಲ್ಲಿ ಜಿಲ್ಲಾ ಪಂಚಾಯತಿ ಅಧ್ಯಕ್ಷೆಯಾಗಿ ಕಾರ್ಯನಿರ್ವಹಿಸಿದ್ದ ವೀಣಾ ಕಾಶಪ್ಪನವರ ಅವರನ್ನುಕಣಕ್ಕಿಳಿಸಿತ್ತು.  ೨೦೨೪ರ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ  ಬಾಗಲಕೋಟೆ

ಕ್ಷೇತ್ರಕ್ಕೆ ಹೊಸ ಮುಖ ಪರಿಚಯಿಸಿದೆ. ಬಾಗಲಕೋಟೆ ಲೋಕಸಭಾ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಸಂಯುಕ್ತಾ ಪಾಟೀಲ ಅವರು ಕಾಂಗ್ರೆಸ್ ಪಕ್ಷದಲ್ಲಿ ಕರ್ನಾಟಕ ರಾಜ್ಯ ಪ್ರದೇಶ ಯುವ ಕಾಂಗ್ರೆಸ್ ಕಾರ್ಯದರ್ಶಿಯಾಗಿ, ವಿಜಯಪುರ ಡಿಸಿಸಿ ಬ್ಯಾಂಕ್ ನಿರ್ದೇಶಕರಾಗಿ ಕಾರ್ಯನಿರ್ವಹಿಸಿದ್ದಾರೆ. ಈಗ ಅವರು ಬಾಗಲಕೋಟೆ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿದ್ದು, ಗದ್ದಿಗೌಡರ ವಿರುದ್ಧ ಗೆಲ್ಲಲೇ ಬೇಕು ಎಂಬ ಛಲವನ್ನಿಟ್ಟುಕೊಂಡು ಕ್ಷೇತ್ರಾದ್ಯಂತ ಮತಾಶೀರ್ವಾದ ಕೇಳುತ್ತಿದ್ದಾರೆ.  ಈ ಇಬ್ಬರಲ್ಲಿ ಯಾರಿಗೆ ಗೆಲವಿನ ಗದ್ದುಗೆ ದಕ್ಕುತ್ತದೆ ಎಂಬುದನ್ನು ಕಾದುನೋಡಬೇಕಿದೆ.

**<><*<><>*><>**

ಐಪಿಎಲ್ ಟಿ-೨೦ ಕ್ರಿಕೆಟ್ ಟೂರ್ನಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ದೆಹಲಿಯ ಅರುಣ್ ಜೇಟ್ಲಿ ಮೈದಾನದಲ್ಲಿ ನಡೆಯಲಿರುವ ಮೊದಲ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩:೩೦ಕ್ಕೆ ಆರಂಭವಾಗಲಿದೆ.  ಲಖನೌದ ಏಕನಾ ಕ್ರಿಕೆಟ್ ಮೈದಾನದಲ್ಲಿ ನಡೆಯುವ ೨ ನೇ ಪಂದ್ಯದಲ್ಲಿ ಲಖನೌ ಸೂಪರ್ ಜೈಂಟ್ಸ್ ತಂಡ ರಾಜಸ್ಥಾನ ರಾಯಲ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭.೩೦ಕ್ಕೆ ಪ್ರಾರಂಭವಾಗಲಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**